ಸುಭಾಷ್ ಚಂದ್ರ, ಭಾ.ಆ.ಸೇ.
ಸರ್ಕಾರದ ಪ್ರಧಾನ ಕಾರ್ಯದರ್ಶಿ
Subhash Chandra, I.A.S.
Principal Secretary to Government

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಅ.ಸ.ಪ ಸಂಖ್ಯೆ:ಗ್ರಾಅಪ/453/ಆಂಆಸ/2015

ದಿನಾಂಕ:16.10.2015

ಪ್ರಿಯ ಶ್ರೀ

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಆರ್ಥಿಕ ಶಿಸ್ತನ್ನು ಉತ್ತಮಗೊಳಿಸುವ ಬಗ್ಗೆ.

ಉಲ್ಲೇಖ: ಸುತ್ತೋಲೆ ಸಮ ಸಂಖ್ಯೆ, ದಿನಾಂಕ: 08.10.2015.

*****

ಉಲ್ಲೇಖಿತ ಪತ್ರದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಆರ್ಥಿಕ ಶಿಸ್ತನ್ನು ಉತ್ತಮಗೊಳಿಸುವ ಬಗ್ಗೆ ನಿರ್ದೇಶನಗಳನ್ನು ನೀಡಲಾಗಿತ್ತು. ಇದಕ್ಕೆ ಸಂಬಂಧಿಸಿದಂತೆ ಇಲಾಖೆಯ ಎಲ್ಲಾ ಅನುಷ್ಠಾನಾಧಿಕಾರಿಗಳು ಕೇಂದ್ರ ಮತ್ತು ರಾಜ್ಯ ಸರ್ಕಾರ ಹಾಗೂ ಇತರೆ ಮೂಲಗಳಿಂದ ಸ್ವೀಕರಿಸಲಾಗುವ ಅನುದಾನ ನಿರ್ವಹಣೆಗೆ ಸಂಬಂಧಿಸಿದಂತೆ ನಗದು ಪುಸ್ತಕ ಹಾಗೂ ಇತರೆ ವಹಿಗಳ ನಿರ್ವಹಣೆಯಲ್ಲಿ ಕೆಲವು ಲೋಪದೋಷಗಳು ಕಂಡುಬರುತ್ತಿದ್ದು, ಅನುದಾನ ನಿರ್ವಹಣೆಯಲ್ಲಿ ಆರ್ಥಿಕ ಸಂಹಿತೆ ರೀತ್ಯ ಸರಿಯಾದ ಕ್ರಮವನ್ನು ಅನುಸರಿಸಲಾಗುತ್ತಿದೆಯೇ ಎಂಬ ಬಗ್ಗೆ ಎಲ್ಲಾ ವಿಭಾಗಗಳ ಮುಖ್ಯಸ್ಥರು ಹಾಗೂ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳು ತಮ್ಮ ವೈಯಕ್ತಿಕ ಗಮನಹರಿಸಿ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಸೂಚಿಸುತ್ತಿದ್ದೇನೆ.

1. ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇಧ 328 ರಿಂದ 332 ರವರೆಗೆ ಸೂಚಿತವಾಗಿರುವ ಎಲ್ಲಾ ನಿಯಮಗಳನ್ನು ಪಾಲಿಸುವುದು ಮತ್ತು ದಾಖಲೆಗಳನ್ನು ನಿರ್ವಹಿಸುವುದು.
2. ಅನುದಾನ ಸ್ವೀಕೃತಿ ಮತ್ತು ಪಾವತಿಯ ಬಗ್ಗೆ ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇಧ (4) ರಿಂದ (16) ರವರೆಗೆ ಹಾಗೂ 345 ಮತ್ತು 346 ಗಳಲ್ಲಿ ಸೂಚಿತವಾಗಿರುವ ಎಲ್ಲಾ ನಿಯಮಗಳನ್ನು ಪಾಲಿಸುವುದು ಮತ್ತು ದಾಖಲೆಗಳನ್ನು ನಿರ್ವಹಿಸುವುದು.
3. ಕರ್ನಾಟಕ ಪಬ್ಲಿಕ್ ವರ್ಕ್ಸ್ ಅಕೌಂಟ್ ಕೋಡ್ ಪ್ಯಾರಾಗ್ರಾಫ್ (76)ನ್ನು (77)ರ ಜೊತೆ ಓದಿಕೊಂಡಂತೆ Form P.W.A.-1 ಹಾಗೂ ಪ್ಯಾರಾಗ್ರಾಫ್ (81)ರ Form P.W.A.-2 ರಂತೆ ನಿರ್ವಹಿಸುವುದು ಕಡ್ಡಾಯವಾಗಿರುತ್ತದೆ.
4. ಬ್ಯಾಂಕ್‌ಗಳಲ್ಲಿ ಕೇಂದ್ರ ಮತ್ತು ರಾಜ್ಯ ಹಾಗೂ ಇತರೆ ಮೂಲಗಳ ಅನುದಾನದ ವ್ಯವಹಾರ ನಿರ್ವಹಿಸುತ್ತಿರುವ ಕಛೇರಿ ಮುಖ್ಯಸ್ಥರುಗಳು ಹಾಗೂ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳು ತಮ್ಮ ಹೆಸರಿನಲ್ಲಿ ಬ್ಯಾಂಕ್ ಖಾತೆಗಳನ್ನು ತೆರೆಯದೇ ಸರ್ಕಾರದ ಹೆಸರಿನಲ್ಲಿ ಬ್ಯಾಂಕ್ ಖಾತೆಗಳನ್ನು ತೆರೆಯುವಾಗ ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇಧ (76) ರ ನಿಯಮಗಳನ್ನು ಪಾಲಿಸುವುದು.
5. ಬ್ಯಾಂಕ್‌ಗಳಲ್ಲಿ ಕೇಂದ್ರ ಮತ್ತು ರಾಜ್ಯ ಹಾಗೂ ಇತರೆ ಮೂಲಗಳ ಅನುದಾನದ ವ್ಯವಹಾರ ನಿರ್ವಹಿಸುತ್ತಿರುವ ಕಛೇರಿ ಮುಖ್ಯಸ್ಥರುಗಳು ಹಾಗೂ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳು ತಮ್ಮ ದೃಢೀಕೃತ ಮಾದರಿ ಸಹಿಯನ್ನು ಮತ್ತು ಸಂಬಂಧಿಸಿದ ದಾಖಲೆಗಳನ್ನು ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇಧ (78) ರ ನಿಯಮಗಳನ್ವಯ ಬ್ಯಾಂಕ್‌ಗಳಿಗೆ ಸಲ್ಲಿಸುವುದು ಹಾಗೂ ಕಡತ ನಿರ್ವಹಿಸುವುದು ಕಡ್ಡಾಯವಾಗಿರುತ್ತದೆ.
6. ಕಛೇರಿ ಮುಖ್ಯಸ್ಥರುಗಳು ಹಾಗೂ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳು ಪ್ರತೀ ಪಾವತಿಗೆ ಜಂಟಿರುಜು ಮಾಡತಕ್ಕದ್ದು.
7. ಬ್ಯಾಂಕಿನಲ್ಲಿ ಯೋಜನಾ ಮಾರ್ಗಸೂಚಿಯಂತೆ ಅನುದಾನವನ್ನು ನಿರ್ವಹಿಸುವುದು ಹಾಗೂ ನಿಖರ ಬಡ್ಡಿದರ ಮತ್ತು ಬಡ್ಡಿ ಮೊತ್ತವನ್ನು ಬ್ಯಾಂಕ್ ಪಾವತಿಸಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.
8. ಇದಕ್ಕೆ ಸಂಬಂಧಪಟ್ಟ ತ್ರೈಮಾಸಿಕ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವುದು.

ಆದರಗಳೊಂದಿಗೆ,

ತಮ್ಮ ವಿಶ್ವಾಸಿ,

3/11

ಗೆ,

ಬಹುಮಹಡಿ ಕಟ್ಟಡ, 3ನೇ ಮಹಡಿ, 3ನೇ ಗೇಟ್, ಬೆಂಗಳೂರು-560 001. M.S. Building, 3rd Floor, Gate No. 3, Bangalore-560 001.
Tel. : 080-2235 3929 / 2203 2446 Fax : 080-2235 3927
e-mail : prsrdpr@karnataka.gov.in / principalsecretaryrdpr@gmail.com Website : www.rdpr.kar.nic.in